## MAY 01, 2026
## ALL INDIA RADIO- DHARWAD
## PRADESH SAMACHARA (KANNADA) 7:05 AM

<><><>

ಮುಖ್ಯಾಂಶಗಳು :

- ಬೆಂಗಳೂರು ನಗರದಿಂದ ಚನ್ನೈ ಹಾಗೂಹೈದರಾಬಾದ್‌ಗೆ ಹೈಸ್ಪೀಡ್ ರೈಲು ಕಾರಿಡಾರ್ – ರಾಜ್ಯ ಸಚಿವ ಸಂಪುಟ ಅನುಮೋದನೆ.

- ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿತ ದುರಂತ; ಕಾರ್ಯಪಾಲಕ ಇಂಜಿನಿಯರ್ ಅಮಾನತು – ಮುಖ್ಯಮಂತ್ರಿ ಆದೇಶ.

- ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಪ್ರಗತಿ ಪರಿಶೀಲನೆ; ಹಲವು ನಿರ್ಧಾರಗಳು– ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್.

- ಏಪ್ರಿಲ್ ತಿಂಗಳಲ್ಲಿ ಯಾವುದೇ ಕೊರತೆ ಇಲ್ಲದೇ ಗರಿಷ್ಠ ವಿದ್ಯುತ್ ಪೂರೈಕೆ; ದೇಶದ ಮಹತ್ವದ ಮೈಲಿಗಲ್ಲು – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

- ಇಂದು ಬುದ್ಧಪೂರ್ಣಿಮೆ ಹಾಗೂ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ.

<><><>

ವಾರ್ತೆಗಳ ವಿವರ...

<><><>

**ಬೆಂಗಳೂರು ನಗರದಿಂದ ಚನ್ನೈ ಹಾಗೂ**ಹೈದರಾಬಾದ್‌ಗೆ ಹೈಸ್ಪೀಡ್ ರೈಲು ಕಾರಿಡಾರ್‌ಗಳಿಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ರಾಜ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ ಪಾಟೀಲ್ ಹೇಳಿದ್ದಾರೆ. ಸಚಿವ ಸಂಪುಟ ಸಭೆಯ ಬಳಿಕ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಬೆಂಗಳೂರಿನಿಂದ ಹೈದರಾಬಾದ್ ಗೆ 606 ಕಿಲೋ ಮೀಟರ್ ಹಾಗೂ ಚನ್ನೈ ತನಕ 306 ಕಿಲೋಮೀಟರ್ ಕಾರಿಡಾರ್ ಯೋಜನೆ ಇದಾಗಿದೆ ಎಂದರು. ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗೆ, ಬಿಡದಿಯಲ್ಲಿ 18 ಸಾವಿರದ 133 ಕೋಟಿ ಎ.ಐ– ಸಿಟಿ, ವರ್ಕ್ ಲಿವ್ ಪ್ಲೇ ಎಂಬ ಉಪನಗರ ನಿರ್ಮಿಸಲು ಸರ್ಕಾರ ನಿರ್ಧರಿಸಿದೆ. ಸುಖದೇವ್ ಥೋರಟ್ ಅಧ್ಯಕ್ಷತೆಯ ಸಮಿತಿ ಸಲ್ಲಿಸಿರುವ ರಾಜ್ಯ ಶಿಕ್ಷಣ ನೀತಿಯನ್ನು ಸಂಪುಟ ಸಭೆಯಲ್ಲಿ ಮಂಡಿಸಿ ಚರ್ಚಿಸಲಾಯಿತು. ಅಧಿಕಾರಿಗಳಿಂದ ಮಾಹಿತಿ ಕೇಳಲಾಗಿದ್ದು, ಇದಕ್ಕಾಗಿ ಪ್ರತ್ಯೇಕ ಸಭೆಯನ್ನು ಶೀಘ್ರವೇ ಹಮ್ಮಿಕೊಳ್ಳಲಾಗುವುದು ಎಂದರು. ಕಲಬುರಗಿ ಜಿಲ್ಲೆ ಜೇವರ್ಗಿಯಲ್ಲಿ ಹೊಸ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗೆ 73.75 ಕೋಟಿ ರೂಪಾಯಿ ವೆಚ್ಚಕ್ಕೆ ಒಪ್ಪಿಗೆ, ಬೆಳಗಾವಿ ಜಿಲ್ಲಾಧಿಕಾರಿ ಕಚೇರಿ ನೂತನ ಕಟ್ಟಡ ನಿರ್ಮಾಣದ ಹೆಚ್ಚುವರಿ ಕಾಮಗಾರಿಗೆ 20 ಕೋಟಿ ರೂಪಾಯಿ ಅನುಮೋದನೆ ನೀಡಲಾಗಿದೆ ಎಂದರು.

<><><>

**ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು 7 ಮಂದಿ ಮೃತಪಟ್ಟ** ದುರ್ಘಟನೆ ಬಗ್ಗೆ, ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು; ಗೋಡೆಗೆ ಹಾನಿಯಾಗುವಂತೆ ಮಣ್ಣು ಸುರಿದ ಕಾರಣಕ್ಕಾಗಿ ಕಾರ್ಯಪಾಲಕ ಇಂಜಿನಿಯರ್‌ನ್ನು ಅಮಾನತುಗೊಳಿಸುವಂತೆ ಹಾಗೂ ಗೋಡೆಗೆ ಹಾನಿಯಾಗುವ ಸಾಧ್ಯತೆ ಇರುವುದನ್ನು ಗಮನಿಸದ ಆಸ್ಪತ್ರೆಯ ಮುಖ್ಯಸ್ಥರಿಗೆ ನೋಟಿಸ್ ನೀಡುವಂತೆ, ಸೂಚಿಸಿದ್ದಾರೆ. **ಬೆಂಗಳೂರಿನಲ್ಲಿ ಭಾರೀ ಮಳೆಯಿಂದಾಗಿ ಉಂಟಾದ** ನಾಗರಿಕ ಸಮಸ್ಯೆಗಳ ಬಗ್ಗೆ, ಹಿರಿಯ ಅಧಿಕಾರಿಗಳೊಂದಿಗೆಸಭೆ ನಡೆಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ; ಮೃತಪಟ್ಟವರ ಕುಟುಂಬಕ್ಕೆ 5 ಲಕ್ಷ ರೂಪಾಯಿ ಪರಿಹಾರ ಘೋಷಿಸಲಾಗಿದೆ. ಗಾಯಗೊಂಡವರಿಗೆ ಉಚಿತ ಚಿಕಿತ್ಸೆ ನೀಡಲಾಗುವುದು. ಮಳೆಯಿಂದಾಗಿ ಸಾಕಷ್ಟು ಹಾನಿಯಾಗಿದ್ದು, 250ಕ್ಕೂ ಹೆಚ್ಚು ಮರಗಳು ಬಿದ್ದಿವೆ ಎಂದು, ತಿಳಿಸಿದರು. ಮುಂಗಾರು ಮಳೆ ಪ್ರಾರಂಭವಾಗುವ ಮುಂಚೆಯೇ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು. ಒಣಗಿರುವ ರೆಂಬೆಗಳನ್ನು ಕತ್ತರಿಸಬೇಕು. ರಾಜಾ ಕಾಲುವೆಯ ಹೂಳು ತೆಗೆಯಬೇಕು. ರಸ್ತೆಯಲ್ಲಿ ಬಿದ್ದಿರುವ ಮರ, ಗಿಡ ಹಾಗೂ ಕಸವನ್ನು ಕೂಡಲೇ ತೆರವು ಮಾಡಿ, ಅಂಡರ್‌ಪಾಸ್‌ಗಳಲ್ಲಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸುವಂತೆ ಸೂಚಿಸಿದರು.

<><><>

**ಎತ್ತಿನಹೊಳೆ ಯೋಜನೆ ವಿಚಾರವಾಗಿ, ಕೇಂದ್ರ ಸರ್ಕಾರ ಕೆಲವು ಷರತ್ತುಗಳನ್ನು** ವಿಧಿಸಿ, ಪರ್ಯಾಯ ಭೂಮಿಯನ್ನು ಕೇಳಿದೆ. ಕಂದಾಯ ಇಲಾಖೆ ಭೂಮಿ ನೀಡಲು ಒಪ್ಪಿಕೊಂಡಿದೆ. ಸುಮಾರು ಶೇಕಡ 10ರಷ್ಟು ಬಾಕಿ ಇದೆ. ವಾರದಲ್ಲೇ ಆ ಭೂಮಿಯನ್ನು ಹಸ್ತಾಂತರಿಸಲಾಗುವುದು ಎಂದು ಜಲಸಂಪನ್ಮೂಲ ಖಾತೆಯ ಸಚಿವರಾಗಿರುವ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ. ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಪ್ರಗತಿ ಪರಿಶೀಲನೆಗಾಗಿ ಉನ್ನತ ಮಟ್ಟದ ಸಭೆ ನಡೆಸಿ ಅವರು

ಮಾತನಾಡಿದರು. ಯೋಜನೆ ಕಾಮಗಾರಿ ಮುಂದುವರಿಯಲು ಕೆಲವು ಕಡೆ ಅರಣ್ಯ ಭೂಮಿಯ ಅಡೆತಡೆ ಇದೆ. ಸದರಿ ಜಾಗಕ್ಕೆ ಪರ್ಯಾಯವಾಗಿ ಭೂಮಿ ನೀಡಲು ಕಂದಾಯ ಇಲಾಖೆ ಸಿದ್ಧವಿದ್ದು, ಅರಣ್ಯ ಇಲಾಖೆಗೆ ಪರ್ಯಾಯ ಭೂಮಿ ನೀಡುವ ಸ್ಥಳಗಳ ಪಟ್ಟಿ ನೀಡಲಾಗುವುದು. ಅವರು ಒಪ್ಪಿದರೆ, ತ್ವರಿತಗತಿಯಲ್ಲೇ ಭೂಮಿ ಹಸ್ತಾಂತರಿಸುವುದಾಗಿ ತಿಳಿಸಿದರು. ಶೀಘ್ರವಾಗಿಯೇ ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳಿಗೆ ನೀರು ಹರಿಸಲಾಗುವುದು. ಮೇಕೆದಾಟು ಯೋಜನೆಗೆ ಸಂಬಂಧಪಟ್ಟಂತೆ, ಪರಿಷ್ಕೃತ ಯೋಜನಾ ವೆಚ್ಚದೊಂದಿಗೆ ಸಮಿತಿಯ ಮುಂದೆ ಪ್ರಸ್ತಾವನೆ ಸಲ್ಲಿಸಲಾಗುವುದು. 5 ಸಾವಿರದ 300 ಎಕರೆ ಭೂಮಿಯನ್ನು ಲಭ್ಯವಿರುವ ಕಡೆಗೆ ಅರಣ್ಯ ಇಲಾಖೆಗೆ ನೀಡಲು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

<><><>

**ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯು ಬೆಂಗಳೂರು ನಗರದ** 'ನಮ್ಮ 112' ಸೇವೆಯಲ್ಲಿ ಬಹುಭಾ ೨ ವ್ಯವಸ್ಥೆಯನ್ನು ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಜಾರಿಗೆ ತರಲಾಗಿದೆ ಎಂದು ಗೃಹ ಖಾತೆ ಸಚಿವ ಡಾ. ಜಿ. ಪರಮೇಶ್ವರ್ ತಮ್ಮ ಎಕ್ಸ್ ಖಾತೆಯ ಮೂಲಕ ತಿಳಿಸಿದ್ದಾರೆ. ದೇಶದ 10ಕ್ಕೂ ಹೆಚ್ಚು ಭಾ ೆಗಳಲ್ಲಿ 'ನಮ್ಮ 112' ಸೇವೆ ಒದಗಿಸಲಾಗುತ್ತಿದೆ. ಆರ್ಟಿಫಿಶಿಯಲ್ ಇಂಟಲಿಜೆನ್ಸ್ (೦ಐ) ತಂತ್ರಜ್ಞಾನ ಆಧರಿಸಿ ಕನ್ನಡ, ಹಿಂದಿ, ತಮಿಳು, ತೆಲುಗು, ಮಲೆಯಾಳಂ, ಮರಾಠಿ, ಅಸ್ಸಾಮಿ, ಬೆಂಗಾಲಿ, ಗುಜರಾತಿ, ಒಡಿಯಾ, ಮಣಿಪುರಿ, ಕಾಶ್ಮೀರಿ ಮತ್ತು ನೇಪಾಳಿ ಭಾ ೆಗಳು ಸೇರಿದಂತೆ ಸ್ಪ್ಯಾನಿ ್, ಫ್ರೆಂಚ್ ಮತ್ತು ಅರೇಬಿಕ್ ಭಾ ೆಗಳಲ್ಲಿಯೂ ಸೇವೆ ಸಿಗಲಿದೆ.

ಯಾರಾದರೂ 112 ಗೆ ಕರೆ ಮಾಡಿದಾಗ, ಭಾ ೨ ಸಮಸ್ಯೆ ಇದ್ದಲ್ಲಿ, ಕರೆ ಸ್ವಯಂಚಾಲಿತವಾಗಿ ಕರೆ ಮಾಡುವವರಿಗೆ ಅನುಕೂಲಕರವಾದ ಭಾ ೆಗೆ ಅನುವಾದಗೊಳ್ಳುತ್ತದೆ. ಕೃತಕ ಬುದ್ಧಿಮತ್ತೆಯನ್ನು ಬಳಸಿಕೊಂಡು ಹತ್ತು ಭಾ ೆಗಳನ್ನು ಸಕ್ರಿಯಗೊಳಿಸಲಾಗಿದೆ.

<><><>

**ಈಗ ಪ್ರಕಟಣೆ; ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಏಪ್ರಿಲ್ ತಿಂಗಳಲ್ಲಿ ಯಾವುದೇ ಕೊರತೆ ಇಲ್ಲದೇ ಗರಿಷ್ಠ ವಿದ್ಯುತ್** ಬೇಡಿಕೆ 256.1 ಗಿಗಾವ್ಯಾಟ್ ಪೂರೈಸುವ ಮೂಲಕ, ಭಾರತ ಮಹತ್ವದ ಮೈಲಿಗಲ್ಲು ಸಾಧಿಸಿದೆ ಎಂದು, ಕೇಂದ್ರ ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ, ತಿಳಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಈ ಕುರಿತು ಮಾಹಿತಿ ನೀಡಿರುವ ಅವರು, ಈ ಸಾಧನೆಯಲ್ಲಿ ಸೌರವಿದ್ಯುತ್ ಪಾತ್ರ ನಿರ್ಣಾಯಕವಾಗಿದೆ ಎಂದಿದ್ದಾರೆ. ಒಟ್ಟು ಬೇಡಿಕೆಯಲ್ಲಿ ಶೇಕಡ 21ರಷ್ಟು ವಿದ್ಯುತ್‌ನ್ನು ಸೌರಶಕ್ತಿಯಿಂದ ಪೂರೈಕೆ ಮಾಡಲಾಗಿದೆ.

ಬೇಡಿಕೆಯ ಗರಿಷ್ಠ ಹಂತದಲ್ಲಿ, 57 ಗಿಗಾವ್ಯಾಟ್‌ಗಳನ್ನು ಹಾಗೂ ಮಧ್ಯಾಹ್ನದ ಸಮಯದಲ್ಲಿ, 81 ಗಿಗಾವ್ಯಾಟ್ ಸೌರಶಕ್ತಿ ವಿದ್ಯುತ್‌ನ್ನು ಉತ್ಪಾದಿಸಲಾಗಿದೆ ಎಂದು ತಿಳಿಸಿದ್ದಾರೆ. ಈ ಅಭಿವೃದ್ಧಿಯು ದೇಶದ ಇಂಧನ ಮಿಶ್ರಣದಲ್ಲಿ, ರಚನಾತ್ಮಕ ಬದಲಾವಣೆಯನ್ನು ತೋರಿಸುತ್ತದೆ. ಶುದ್ಧ ಮತ್ತು ನವೀಕರಿಸಬಹುದಾದ ಮೂಲಗಳು ಇಂಧನ ಭದ್ರತೆಯನ್ನು ಹೆಚ್ಚು ಬಲಪಡಿಸುತ್ತಿವೆ. ಹೆಚ್ಚುತ್ತಿರುವ ಬೇಡಿಕೆಯನ್ನು ಬೆಂಬಲಿಸುತ್ತಿವೆ ಎಂದು ಅವರು ಹೇಳಿದ್ದಾರೆ.

<><><>

**ಇಂದು ಬುದ್ಧ ಪೂರ್ಣಿಮೆ. ವೈಶಾಖ ಶುಕ್ಲ ಹುಣ್ಣಿಮೆಯಂದು ಜನಿಸಿದ ಸಿದ್ಧಾರ್ಥ** ಗೌತಮನು, ಬುದ್ಧನಾಗಿ, ಚತುರಾರ್ಯ ಸತ್ಯಗಳನ್ನು ಬೋಧಿಸಿ ಜಗತ್ತಿಗೆ ಬೆಳಕನ್ನು ನೀಡಿದ ಪುಣ್ಯ ದಿನವಿಂದು. ತಥಾಗತ ಗೌತಮ ಬುದ್ಧನ ಉದಾತ್ತ ವಾಣಿ ಹಾಗೂ ಈ ದಿನದ ವಿಶೇ ‘ತೆ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಸಾಹಿತಿ ಹಾಗೂ ಮುಂಬಯಿ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕರಾದ ಪ್ರೊಫೆಸರ್ ತಾಳ್ತಜೆ ವಸಂತಕುಮಾರ...

<><><>

**ಧ್ವನಿ: ತಾಳ್ತಜೆ ವಸಂತಕುಮಾರ್**

<><><>

**ಬುದ್ಧಪೂರ್ಣಿಮೆ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಸೇರಿದಂತೆ ಗಣ್ಯರು ಶುಭಾಶಯ ತಿಳಿಸಿದ್ದಾರೆ.**

<><><>

**ಇಂದು ಅಂತಾರಾಷ್ಟ್ರೀಯ ಕಾರ್ಮಿಕ ದಿನ. ಪ್ರತಿ ವ ‘ೕ ಮೇ 1 ರಂದು** ಅಂತಾರಾಷ್ಟ್ರೀಯ ಕಾರ್ಮಿಕ ದಿನವನ್ನು ಆಚರಿಸಲಾಗುತ್ತದೆ. ಕಾರ್ಮಿಕರ ಶ್ರಮ ಹಾಗೂ ತ್ಯಾಗವನ್ನು ಈ ದಿನದಂದು ಸ್ಮರಿಸಿ, ಗೌರವಿಸಲಾಗುತ್ತದೆ. ರಾಜ್ಯ ಕಾರ್ಮಿಕ ಇಲಾಖೆ ವತಿಯಿಂದ ಕಾರ್ಮಿಕರ ಕಲ್ಯಾಣಕ್ಕಾಗಿ, ಗಿಗ್ ವರ್ಕರ್ಸ್ ಕಾನೂನು ಜಾರಿಗೆ ತರಲಾಗಿದ್ದು, ಕಾರ್ಮಿಕ ಕಾರ್ಡ್ ವಿತರಿಸಲಾಗುತ್ತಿದೆ. ದಿನದ ವಿಶೇ ‘ತೆ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡ ಜಿಲ್ಲೆ ಹುಬ್ಬಳ್ಳಿ ವಿಭಾಗದ, ಕಾರ್ಮಿಕ ಇಲಾಖೆ ಸಹಾಯಕ ಆಯುಕ್ತರಾದ ಸಚಿನ್ ವೈ ಹಳೆಮನಿ

<><><>

**ಧ್ವನಿ:**

**ಸಚಿನ್ ವೈ ಹಳೆಮನಿ**

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

<><><>

- **ಬೆಂಗಳೂರು ನಗರದಿಂದ ಚನ್ನೈ ಹಾಗೂಹೈದರಾಬಾದ್‌ಗೆ ಹೈಸ್ಪೀಡ್ ರೈಲು ಕಾರಿಡಾರ್ – ರಾಜ್ಯ ಸಚಿವ ಸಂಪುಟ ಅನುಮೋದನೆ.**

- ಬೆಂಗಳೂರಿನ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿತ ದುರಂತ; ಕಾರ್ಯಪಾಲಕ ಇಂಜಿನಿಯರ್ ಅಮಾನತು – ಮುಖ್ಯಮಂತ್ರಿ ಆದೇಶ.

- ರಾಜ್ಯದ ಪ್ರಮುಖ ನೀರಾವರಿ ಯೋಜನೆಗಳ ಪ್ರಗತಿ ಪರಿಶೀಲನೆ; ಹಲವು ನಿರ್ಧಾರಗಳು– ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್.

- ಏಪ್ರಿಲ್ ತಿಂಗಳಲ್ಲಿ ಯಾವುದೇ ಕೊರತೆ ಇಲ್ಲದೇ ಗರಿಷ್ಠ ವಿದ್ಯುತ್ ಪೂರೈಕೆ; ದೇಶದ ಮಹತ್ವದ ಮೈಲಿಗಲ್ಲು – ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

- ಇಂದು ಬುದ್ಧಪೂರ್ಣಿಮೆ ಹಾಗೂ ಅಂತಾರಾಷ್ಟ್ರೀಯ ಕಾರ್ಮಿಕ ದಿನಾಚರಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

******END******

<><><><><><>